# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1142** |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಜಿಲ್ಲೆಯಲ್ಲಿರುವ ವಿ.ವಿ ಸ್ನಾತಕೋತ್ತರ ಪದವಿಯ 2023-24ನೇ ಶೈಕ್ಷಣಿಕ ವರ್ಷಕ್ಕೆ ವಿದ್ಯಾರ್ಥಿಗಳು ವ್ಯಾಸಂಗ ಪಡೆಯಲು ಪ್ರವೇಶ ಪಡೆದಿದ್ದು, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಹಾಸ್ಟೆಲ್ ಸೌಲಭ್ಯ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯ; | ತುಮಕೂರು ನಗರದಲ್ಲಿ 02 ಮೆಟ್ರಿಕ್ ನಂತರದ ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಈ ವಿದ್ಯಾರ್ಥಿನಿಲಯಗಳಲ್ಲಿ 275 ವಿದ್ಯಾರ್ಥಿನಿಯರಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>2023-24ನೇ ಸಾಲಿನ ಸ್ನಾತಕೋತ್ತರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ದಿನಾಂಕ:13.09.2023 ರಿಂದ ದಿನಾಂಕ:11.10.2023 ರವರೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಪ್ರಸಕ್ತ ಸಾಲಿನಲ್ಲಿ 142 ವಿದ್ಯಾರ್ಥಿನಿಯರು ಪ್ರವೇಶ ಪಡೆದಿರುತ್ತಾರೆ.<br><br>ತುಮಕೂರು ವಿಶ್ವವಿದ್ಯಾನಿಲಯದಿಂದ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಕ್ಕೆ ತಡವಾಗಿ ಅಂದರೆ ದಿನಾಂಕ:04.10.2023ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಿದ್ದು ಇಲಾಖೆಯ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ:11.10.2023ಕ್ಕೆ ಮುಕ್ತಾಯ ಗೊಂಡಿದ್ದು, 02 ವಿದ್ಯಾರ್ಥಿನಿಲಯಗಳಿಂದ 15 ಹೊಸ ಅರ್ಜಿಗಳು ಮಾತ್ರ ಸ್ವೀಕೃತವಾಗಿವೆ. ಈ ಎಲ್ಲಾ 15 ವಿದ್ಯಾರ್ಥಿನಿಯರಿಗೂ ಪ್ರವೇಶ ಕಲ್ಪಿಸಲಾಗಿರುತ್ತದೆ ಹಾಗೂ ಅರ್ಜಿ ಸಲ್ಲಿಕೆಗೆ ದಿನಾಂಕ ಮುಕ್ತಾಯಗೊಂಡಿರುವುದರಿಂದ ವಿದ್ಯಾರ್ಥಿನಿಲಯಗಳಲ್ಲಿ 133 ಸ್ಥಾನಗಳು ಖಾಲಿ ಉಳಿದಿರುತ್ತದೆ. |
| ಆ) | ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಅವಧಿಯನ್ನು ಈಗಾಗಲೇ ಕೊನೆಗೊಳಿಸಿದ್ದು, ಇದರಿಂದ ಪಾವಗಡ, ದೊಡ್ಡಬಳ್ಳಾಪುರ, ಚಿತ್ರದುರ್ಗ ಮತ್ತು ಬಾಣಾವರ ಮುಂತಾದ ಊರುಗಳಿಂದ ವಿದ್ಯಾಭ್ಯಾಸಕ್ಕಾಗಿ ತುಮಕೂರಿಗೆ ಬಂದಿರುವ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಕೆಲವು ವಿಶ್ವವಿದ್ಯಾಲಯಗಳು ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪ್ರಕ್ರಿಯೆಯನ್ನು ತಡವಾಗಿ ಪ್ರಾರಂಭಿಸಿರುವುದರಿಂದ ಹಾಗೂ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸುವ ಕಾಲಾವಕಾಶ ದಿನಾಂಕ:11.10.2023 ಕ್ಕೆ ಮುಕ್ತಾಯಗೊಂಡಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸುವ ಕಾಲಾವಕಾಶವನ್ನು ದಿನಾಂಕ:13.12.2023 ರಿಂದ 22.12.2023 ರವರೆಗೆ ವಿಸ್ತರಿಸಲಾಗಿದೆ. |

| | | |
|---|---|---|
| ಇ) | ಈಗಾಗಲೇ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಹಾಸ್ಟೆಲ್ ಸೌಲಭ್ಯ ಸಿಗದಿರುವುದರಿಂದ ಬಾಡಿಗೆ ಕೊಠಡಿ ಮಾಡಿಕೊಂಡು ಬಡ ವಿದ್ಯಾರ್ಥಿಗಳು ವ್ಯಾಸಂಗ ಮಾಡುವುದು ತುಂಬಾ ಕಷ್ಟಕರವಾಗಿರುವುದರಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿದ್ದು, ಪ್ರವೇಶದ ಅವಧಿ ವಿಸ್ತರಿಸುವುದರ ಜೊತೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಹಾಗೂ ಸರ್ಕಾರವು ತುಮಕೂರು ಒಳಗೊಂಡಂತೆ ರಾಜ್ಯದ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ಸಂಖ್ಯೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವುದೆ; | ವಿದ್ಯಾರ್ಥಿನಿಲಯಗಳಿಗೆ ಅವಶ್ಯಕವಿರುವ ಮೂಲಭೂತ ಸೌಕರ್ಯಗಳನ್ನು ಆಯಾ ಆರ್ಥಿಕ ವರ್ಷದ ಅನುದಾನದ ಲಭ್ಯತೆ ಹಾಗೂ ಬೇಡಿಕೆಯನುಸಾರ ಜಿಲ್ಲಾ ಹಂತದಲ್ಲಿ ಕಲ್ಪಿಸಲು ಅಗತ್ಯ ಕ್ರಮ ವಹಿಸಲಾಗುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ 150 ಹೊಸ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. ಈ ಪ್ರಸ್ತಾವನೆಯಲ್ಲಿ ತುಮಕೂರು ಜಿಲ್ಲಾ ಕೇಂದ್ರಕ್ಕೆ 05 ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ ಹಾಗೂ 05 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳು ಒಳಗೊಂಡಿವೆ.<br><br>ಆದಾಗ್ಯೂ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಮತ್ತು ಆಯಾ ಆರ್ಥಿಕ ವರ್ಷದ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ. |

ಸಂಖ್ಯೆ:ಹಿಂವಕ 677 ಬಿಂಎಂಎಸ್ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು